# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉಡುಪಿ-ಮಲ್ಪೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ ಪರಿಷ್ಕೃತ-I ಕ್ಕೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ. ನಅಇ 370 ಮೈಅಪ್ರಾ 2006, ದಿನಾಂಕ: 30.10.06.

೨) ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ ಉಡುಪಿ ಇವರ ಪತ್ರ ಸಂಖ್ಯೆ. ಉನಪ್ರಾ/ಮಾ.ಪ್ಲಾ.ಪರಿಷ್ಕೃತ-I (ಅಂತಿಮ)2007-08/4346, ದಿನಾಂಕ: 22.2.08.

೩) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಪಿಕ ಕಡತ ಸಂಖ್ಯೆ. ನಯೋ(16):ಉಡುಪಿ/ಮ.ಯೋ.ಪ-I(ಅಂತಿಮ)/2008, ದಿನಾಂಕ: 26.6.08.

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಉಡುಪಿ-ಮಲ್ಪೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ ಪರಿಷ್ಕೃತ-I ಕ್ಕೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಉಡುಪಿ ನಗರಾಭಿವೃದ್ಧಿ ಪ್ರಾಧಿಕಾರವು ಉಡುಪಿ-ಮಲ್ಪೆ ಸ್ಥಳೀಯ ಯೋಜನಾ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ಮತ್ತು 13(2) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆ ಪರಿಷ್ಕೃತ-I ರ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಮುಖಾಂತರ ಸಲ್ಲಿಸಿರುತ್ತವೆ.

ಉಡುಪಿ-ಮಲ್ಪೆ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2001ರ ಜನಗಣತಿಯಂತೆ 2,06,353 ಇದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ, 2021 ರ ವೇಳೆಗೆ ಜನಸಂಖ್ಯೆಯು 3,25,000 ಆಗಬಹುದೆಂದು ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಉಡುಪಿ-ಮಲ್ಪೆ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನಾ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳ ಆಧಾರದ ಮೇಲೆ ಹಾಗೂ ಮಹಾ ಯೋಜನೆಯ ತಯಾರಿಕೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 12 ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಮುಂದಿನ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಈ ಕೆಳಗಿನಂತೆ ಕಾಯ್ದಿರಿಸಿ ಮಹಾ ಯೋಜನೆಯನ್ನು ರೂಪಿಸಲಾಗಿದೆ ಹಾಗೂ ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಯನ್ನು ರಚಿಸಲಾಗಿದೆ.

5765
14/8/08

ಉಡುಪಿ-ಮಲ್ಪೆ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 12,753.12 ಹೆಕ್ಟೇರ್ ವಿಸ್ತೀರ್ಣದಲ್ಲಿ ನಗರದ ಯೋಜಿತ ಬೆಳವಣಿಗೆಗಾಗಿ ಒಟ್ಟು 8677.92 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆ ಎಂದು ಪ್ರಸ್ತಾಪಿಸಲಾಗಿದೆ. ಈ ಪೈಕಿ ವಸತಿಗಾಗಿ ಶೇ.61.54, ವಾಣಿಜ್ಯಕ್ಕೆ ಶೇ.1.44, ಕೈಗಾರಿಕೆಗಾಗಿ ಶೇ.3.20, ಸಾರ್ವಜನಿಕ: ಅರೆ ಸಾರ್ವಜನಿಕಕ್ಕೆ ಶೇ.3.27, ಉದ್ಯಾನವನ ಮತ್ತು ಬಯಲು ಜಾಗಕ್ಕೆ ಶೇ.14.50, ಸಾರಿಗೆ ಮತ್ತು ಸಂಪರ್ಕಕ್ಕೆ ಶೇ.15.15 ಮತ್ತು ನಾಗರೀಕ ಸೌಲಭ್ಯಕ್ಕೆ ಶೇ.0.90 ವಿಸ್ತೀರ್ಣವನ್ನು ನಿಗಧಿಪಡಿಸಲಾಗಿದೆ.

ಸದರಿ ಮಹಾ ಯೋಜನೆ ಪರಿಷ್ಕೃತ-I ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಮೇಲೆ ಓದಲಾದ (3) ರ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ನಂತರ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ. ನಅಇ 422 ಮೈಅಪ್ರಾ 2008, ಬೆಂಗಳೂರು, ದಿನಾಂಕ: 7.8.2008.

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಉಡುಪಿ-ಮಲ್ಪೆ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ ಪರಿಷ್ಕೃತ-I ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

([illegible] ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

14/8

ಇವರಿಗೆ:

೧. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಉಡುಪಿ.
೩. ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಉಡುಪಿ.
೪. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
೫. ಕರ್ನಾಟಕ ರಾಜ್ಯಪತ್ರ.
೬. ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
೭. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.